3 ಪ್ರೌಢ ಶಾಲೆಗಳಿಗೆ 24 ಕೊಠಡಿಗಳ ಅವಶ್ಯಕತೆ ಇದೆ.

100 ಪ್ರಾಥಮಿಕ ಶಾಲೆಗಳು ಮತ್ತು 3 ಪ್ರೌಢ ಶಾಲೆಗಳಲ್ಲಿ ಶೌಚಾಲಯ ವ್ಯವಸ್ಥೆ ಇರುವುದಿಲ್ಲ.

ಹಂತ ಹಂತವಾಗಿ ಈ ಶಾಲೆಗಳಿಗೆ ಶಾಲಾ ಕೊಠಡಿಗಳನ್ನು ಮತ್ತು ಶೌಚಾಲಯಗಳನ್ನು ನಿರ್ಮಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರಾರಂಭಿಸಲಾದ ಪ್ರೌಢ ಶಾಲೆಗಳು

1018 (1382)

ಶ್ರೀ. ಕುಂಬೈ ಸುಂದರರಾವ್ (ಸುರತ್ಕಲ್) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) 1996-99 ಅವಧಿಯಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರಾರಂಭಿಸಲಾದ ಪ್ರೌಢಶಾಲೆಗಳ ಒಟ್ಟು ಸಂಖ್ಯೆ ಎಷ್ಟು ?

ಆ) ಈ ಎಲ್ಲಾ ಪ್ರೌಢ ಶಾಲೆಗಳಿಗೆ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳನ್ನು ನೇಮಕ ಮಾಡಲಾಗಿದೆಯೇ ?

ಇ) ಹಾಗಿಲ್ಲದಿದ್ದಲ್ಲಿ ಕೊರತೆ ಇರುವ ಸಿಬ್ಬಂದಿಗಳನ್ನು ತ್ವರಿತವಾಗಿ ನೇಮಕ ಮಾಡಿ ಕೊಡಲಾಗುವುದೇ?

ಶ್ರೀ ಹೆಚ್. ಜಿ. ಗೋವಿಂದ ಗೌಡ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು) :

ಅ) 15

ಆ) ಹುದ್ದೆಗಳ ಮಂಜೂರಾತಿ ಮತ್ತು ಭರ್ತಿಯ ಬಗ್ಗೆ ವಿವರಗಳನ್ನು ಈ ಕೆಳಗೆ ನೀಡಿದೆ :

	ಮಂಜೂರಾದ ಹುದ್ದೆಗಳು	ಭರ್ತಿ ಮಾಡಲಾದ ಹುದ್ದೆಗಳು
ಮುಖ್ಯ ಶಿಕ್ಷಕರು	15	1
ದೈಹಿಕ ಶಿಕ್ಷಕರು	09	-
ಸಹಶಿಕ್ಷಕರು	66	49
ಡಿ ದರ್ಜೆ ನೌಕರರು	15	4
ಒಟ್ಟು	105	54

ಇ) ಹೌದು.

ಉಡುಪಿ ಮತ್ತು ಮಂಗಳೂರು ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕರ ವ್ಯಾಪ್ತಿಗೆ ಬರುವ ವಲಯಗಳು

1019 (1383)

ಶ್ರೀ ಕುಂಬೈ ಸುಂದರರಾವ್ (ಸುರತ್ಕಲ್) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

1) ಉಡುಪಿ ಮತ್ತು ಮಂಗಳೂರು ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕರ ವ್ಯಾಪ್ತಿಗೆ ಬರುವ ವಲಯಗಳ ಸಂಖ್ಯೆ ಎಷ್ಟು ?

2) ಮಂಗಳೂರು ಕಛೇರಿಯಿಂದ ಉಡುಪಿ ಕಛೇರಿಗೆ ಲಿಪಿಕ ಹುದ್ದೆಗಳನ್ನು ಸ್ಥಳಾಂತರಿಸುವ ಆದೇಶವನ್ನು ಸರ್ಕಾರವು ಹೊರಡಿಸಿದೆಯೇ ?

3) ಹಾಗಿದ್ದಲ್ಲಿ, ಮಂಗಳೂರು ಕಛೇರಿಯಲ್ಲಿ ಸಾಕಷ್ಟು ಸಿಬ್ಬಂದಿ ವ್ಯವಸ್ಥೆ ಇರುವಂತೆ ನೋಡಿಕೊಳ್ಳಲಾಗುವುದೇ ?

4) ಕೊರತೆ ಇದ್ದಲ್ಲಿ ಶಿಕ್ಷಣ ಸಂಸ್ಥೆಗಳಲ್ಲಿ ಹೆಚ್ಚುವರಿ ಲಿಪಿಕ ಹುದ್ದೆಗಳನ್ನು ಸಂಬಂಧಪಟ್ಟ ಸ್ಥಳಗಳಿಗೆ ತುಂಬಿಸಿ ಕೊಳ್ಳುವ ಬಗ್ಗೆ ಸರ್ಕಾರವು ಪರಿಶೀಲಿಸುತ್ತಿದೆಯೇ ?

ಶ್ರೀ ಹೆಚ್. ಜಿ. ಗೋವಿಂದ ಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

1) ಉಡುಪಿ ಸಾರ್ವಜನಿಕ ಶಿಕ್ಷಣ ಇಲಾಖಾ ಉಪನಿರ್ದೇಶಕರ ವ್ಯಾಪ್ತಿಗೆ ಬರುವ ವಲಯಗಳ ಒಟ್ಟು ಸಂಖ್ಯೆ 5, ಮಂಗಳೂರು ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕರ ವ್ಯಾಪ್ತಿಗೆ ಬರುವ ವಲಯಗಳ ಸಂಖ್ಯೆ 6

2) ಹೌದು

3) ಹೌದು

4) ಈ ಬಗ್ಗೆ ಪರಿಶೀಲಿಸಲಾಗುವುದು.

ಮತೀಯ ಅಲ್ಪ ಸಂಖ್ಯಾತರು ನಡೆಸುತ್ತಿರುವ ತರಬೇತು ಶಿಕ್ಷಣ ಸಂಸ್ಥೆಗಳು

1020 (1384)

ಶ್ರೀ ಕುಂಬೈ ಸುಂದರರಾವ್ (ಸುರತ್ಕಲ್) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) 1998-99ನೇ ಸಾಲಿನಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕರಾಗಿ ನೇಮಕಗೊಂಡವರಲ್ಲಿ ಮತೀಯ ಅಲ್ಪಸಂಖ್ಯಾತರ ಸಂಖ್ಯೆ ಎಷ್ಟು ? ಇತರರ ಸಂಖ್ಯೆ ಎಷ್ಟು;

ಆ) ಮತೀಯ ಅಲ್ಪಸಂಖ್ಯಾತರಿಂದ ನಡೆಸಲ್ಪಡುವ ಶಿಕ್ಷಕರ ತರಬೇತು ಸಂಸ್ಥೆಗಳ ಸಂಖ್ಯೆ ಎಷ್ಟು?

ಇ) ಉರ್ದು ಮತ್ತಿತರ ಭಾಷಾ ಅಲ್ಪಸಂಖ್ಯಾತರ ಶಾಲೆಗಳಲ್ಲಿ ಕನ್ನಡ ಶಿಕ್ಷಕರ ನೇಮಕಾತಿಯು ಪೂರ್ಣ ಪ್ರಮಾಣದಲ್ಲಿ ಆಗಿದೆಯೇ

ಈ) ಹಾಗಿಲ್ಲದಿದ್ದಲ್ಲಿ ಅದಕ್ಕೆ ಕಾರಣಗಳೇನು?

ಶ್ರೀ ಹೆಚ್. ಜಿ. ಗೋವಿಂದಗೌಡ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಮತೀಯ ಅಲ್ಪಸಂಖ್ಯಾತರು 256

ಇತರರು 859

ಆ) ಮತೀಯ ಅಲ್ಪಸಂಖ್ಯಾತ ಸಂಸ್ಥೆಗಳಡಿ ನೋಂದಾಯಿಸಿ ನಡೆಸಲ್ಪಡುತ್ತಿರುವ